ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:667/2025

ಚಾಸಾ:6 ಪ್ರಾಸಾ:5

ದಿನಾಂಕ: 09.12.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ನಾಗರಾಜ ಹೆಗ್ಡೆ |
| ತಂದೆಯ ಹೆಸರು | : | ಗೋವಿಂದ ಹೆಗ್ಡೆ |
| ವಯಸ್ಸು | : | 30 ವರ್ಷ |
| ಉದ್ಯೋಗ | : | ವ್ಯವಹಾರ |
| ವಾಸ ಸ್ಥಳ | : | ಕಂದಾವರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಸಾಕ್ಷಿಗೆ ನಿಪಿ-2ನ್ನು ತೋರಿಸಿದ್ದು ಅದರಲ್ಲಿ ತನ್ನಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ನಿಪಿ-3 ರಲ್ಲಿ ತನ್ನನ್ನು ನೋಡಿ ಗುರುತಿಸಿರುತ್ತಾರೆ. ಸದ್ರಿ ದಾಖಲೆಯಲ್ಲಿ ಏನು ಬರೆದಿದೆ ಎಂದು ತಿಳಿದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ವಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ: 19-03-2025 ರಂದು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದು, ಚಾಸಾ-1ರವರು ತೋರಿಸಿದ ಸ್ಥಳದಲ್ಲಿ ನಾನು ಮತ್ತು ಚಾಸಾ-5 ರವರ ಸಮಕ್ಷಮ ಸಂಜೆ 5-20 ರಿಂದ 6ರವರೆಗೆ ಪಂಚನಾಮೆ ಜರುಗಿಸಿ ಫೋಟೋ ತೆಗೆದು ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಮೇಲಿನ ಕ್ರಮವನ್ನು ನನ್ನ ಸಮಕ್ಷಮ ಜರುಗಿಸಿದ್ದರೂ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲು: ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆ:** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**